# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 517 (635) |
| ಸದಸ್ಯರ ಹೆಸರು | : | ಶ್ರೀ ಗೋವಿಂದ ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 13.12.2024 |
| ಉತ್ತರಿಸುವವರು | : | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಸ್ವಚ್ಛ ಭಾರತ ಅಭಿಯಾನದಡಿ ಯೋಜನೆಯಲ್ಲಿ ಕಳೆದ 05 ವರ್ಷದ ಅವಧಿಯಲ್ಲಿ ರಾಜ್ಯದಲ್ಲಿ ನಿರ್ಮಾಣಗೊಂಡಿರುವ ಶೌಚಗೃಹಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು) ಹಾಗೂ ಈ ಯೋಜನೆಯಡಿಯಲ್ಲಿ ಕೇಂದ್ರ ಸರ್ಕಾರದಿಂದ ಬಂದಿರುವ ಅನುದಾನವೆಷ್ಟು; ಇದರಲ್ಲಿ ಎಷ್ಟು ಬಳಕೆಯಾಗಿದೆ; ಎಷ್ಟು ಹಣ ಉಳಿಕೆಯಾಗಿದೆ ಹಾಗೂ ಅವಶ್ಯಕತೆಗೆ ತಕ್ಕಂತೆ ಕೇಂದ್ರ ಸರ್ಕಾರದಿಂದ ಅನುದಾನ ಬಂದಿದೆಯೇ; | ಸ್ವಚ್ಛ ಭಾರತ ಮಿಷನ್ (ಗ್ರಾ) ಯೋಜನೆಯಡಿ ರಾಜ್ಯದ ಗ್ರಾಮೀಣ ಪ್ರದೇಶದಲ್ಲಿ ಕಳೆದ 05 ವರ್ಷದ ಅವಧಿಯಲ್ಲಿ ಒಟ್ಟು 6,22,188 ಶೌಚಗೃಹಗಳು ನಿರ್ಮಾಣಗೊಂಡಿರುತ್ತದೆ. **(ಜಿಲ್ಲಾವಾರು ವಿವರವನ್ನು ಅನುಬಂಧ-1ರಲ್ಲಿ ಲಗತ್ತಿಸಲಾಗಿದೆ.)**<br>ವೈಯಕ್ತಿಕ ಗೃಹ ಶೌಚಾಲಯ ನಿರ್ಮಾಣಕ್ಕೆ ಸ್ಥಳದ ಅಭಾವವಿರುವಂತಹ ಕುಟುಂಬಗಳಿಗೆ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಒಟ್ಟು 1.081 ಸಮುದಾಯ ಶೌಚಾಲಯಗಳನ್ನು ನಿರ್ಮಾಣ ಮಾಡಲಾಗಿದ್ದು, ಜಿಲ್ಲಾವಾರು ವಿವರಗಳನ್ನು **ಅನುಬಂಧ-2**ರಲ್ಲಿ ನೀಡಲಾಗಿದೆ.<br>ಈ ಯೋಜನೆಯ ಅನುಷ್ಠಾನಕ್ಕೆ ಕಳೆದ 2019-20ನೇ ಸಾಲಿನಿಂದ ಇಲ್ಲಿಯವರೆಗೆ ಕೇಂದ್ರ ಸರ್ಕಾರದ ಪಾಲು ರೂ.1122.36ಕೋಟಿಗಳ ಹಂಚಿಕೆ ಮಾಡಲಾಗಿದ್ದು, ಈ ಪೈಕಿ ರೂ.660.06 ಕೋಟಿಗಳ ಬಿಡುಗಡೆ ಹಾಗೂ ಆರಂಭಿಕ ಶಿಲ್ಕು ಮತ್ತು ಇತರೆ ರೂ.752.66ಕೋಟಿ ಸೇರಿ ಒಟ್ಟಾರೆ ರೂ.1418.72ಕೋಟಿಗಳು ಲಭ್ಯವಿದ್ದು, ಈ ಪೈಕಿ ರೂ.1331.45 ಕೋಟಿಗಳನ್ನು ವೆಚ್ಚ ಮಾಡಲಾಗಿರುತ್ತದೆ.<br>ಗ್ರಾಮೀಣ ಪ್ರದೇಶದಲ್ಲಿ ವೈಯಕ್ತಿಕ ಗೃಹ ಶೌಚಾಲಯ ನಿರ್ಮಾಣಕ್ಕೆ ಸ್ಥಳದ ಅಭಾವವಿರುವಂತಹ ಕುಟುಂಬಗಳಿಗೆ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಸುಸಜ್ಜಿತ ಹಾಗೂ ಮಹಿಳೆಯರಿಗೆ ವಿಶೇಷ ಸೌಲಭ್ಯಗಳನ್ನು ಒಳಗೊಂಡಂತಹ ಸಮುದಾಯ ಸಂಕೀರ್ಣಗಳನ್ನು ರಾಜ್ಯದ ಪಾಲಿನ ಅನುದಾನದಲ್ಲಿ ನಿರ್ಮಿಸಲು ಉದ್ದೇಶಿಸಲಾಗಿದ್ದು, ಪ್ರಸ್ತುತ ಪ್ರಯೋಗಿಕವಾಗಿ ಕಲ್ಯಾಣ ಕರ್ನಾಟಕ ಜಿಲ್ಲಗಳಲ್ಲಿ |

| | | |
|---|---|---|
| | | 400 ಸಮುದಾಯ ಶೌಚಾಲಯ ಸಂಕೀರ್ಣಗಳನ್ನು ತಲಾ 25 ಲಕ್ಷ ರೂ. ಗಳ ವೆಚ್ಚದಲ್ಲಿ ನಿರ್ಮಿಸಲು ಆಯವ್ಯದಲ್ಲಿ ಘೋಷಿಸಲಾಗಿದ್ದು, ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ.<br>ಜಿಲ್ಲಾವಾರು ವಿವರಗಳನ್ನು **ಅನುಬಂದ-3**ರಲ್ಲಿ ನೀಡಲಾಗಿದೆ. |
| (ಆ) | ಗ್ರಾಮೀಣ ಭಾಗಗಳಲ್ಲಿ ಇನ್ನೂ ಜನರು ಮಲ-ಮೂತ್ರ ವಿಸರ್ಜನೆಗೆ ಬಯಲನ್ನೇ ಆಶ್ರಯಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೇ, ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಹಾಗೂ ಈ ಕಾರ್ಯಕ್ರಮದ ಬಗ್ಗೆ ಅವರಿಗೆ ಅರಿವನ್ನು ಮೂಡಿಸಲು ಯಾವ ರೀತಿಯಲ್ಲಿ ಪ್ರಚಾರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ; (ಜಿಲ್ಲಾವಾರು ವಿವರ ನೀಡುವುದು) | ಸ್ವಚ್ಛ ಭಾರತ ಮಿಷನ್ (ಗ್ರಾ) ಯೋಜನೆಯ ಹಂತ-2ರ ಮಾರ್ಗಸೂಚಿಯಂತೆ ಶೌಚಾಲಯ ರಹಿತ ಕುಟುಂಬಗಳಿಗೆ ಶೌಚಾಲಯಗಳನ್ನು ನಿರ್ಮಾಣ ಮಾಡಲು ಕೇಂದ್ರ ಸರ್ಕಾರವು Citizen App ಅನ್ನು ಜಾರಿಗೆ ತಂದಿದ್ದು, ಈ App ನಲ್ಲಿ ಶೌಚಾಲಯ ರಹಿತ ಫಲಾನುಭವಿಗಳು ನೇರವಾಗಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಈ ರೀತಿ ಅರ್ಜಿಗಳನ್ನು ಸ್ವೀಕರಿಸಿದ ನಂತರ, ಗ್ರಾಮ ಪಂಚಾಯಿತಿ/ ಜಿಲ್ಲಾ ಪಂಚಾಯಿತಿ ಹಂತದಲ್ಲಿ ಪರಿಶೀಲಿಸಿ, ಅರ್ಹ ಫಲಾನುಭವಿಗಳಿಗೆ ಶೌಚಾಲಯಗಳನ್ನು ನಿರ್ಮಿಸಲು ಕ್ರಮವಹಿಸಲಾಗಿದೆ<br>ಗ್ರಾಮೀಣ ಜನರಿಗೆ ಶೌಚಾಲಯದ ಬಳಕೆ ಮತ್ತು ನಿರ್ವಹಣೆಯ ಬಗ್ಗೆ ಹೆಚ್ಚಿನ ಅರಿವು ಮೂಡಿಸಲು ಕೆಳಕಂಡ ವಿವಿಧ ಮಾಹಿತಿ, ಶಿಕ್ಷಣ ಮತ್ತು ಸಂವಹನ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ.<br>• ಗೋಡೆ ಬರಹ, ಕಲಾಜಾಥಾ, ವಿಶೇಷ ಗ್ರಾಮ ಸಭೆಗಳ ಆಯೋಜನೆ.<br>• ಕಿರುಚಿತ್ರಗಳ ಚಿತ್ರೀಕರಣ ಹಾಗೂ ಪ್ರದರ್ಶನ.<br>• ಸಾಮಾಜಿಕ ಜಾಲತಾಣಗಳಾದ Facebook, Twitter, Instagram, You-tube ಹಾಗೂ WhatsApp group ಗಳಲ್ಲಿಯೂ ಸಹ ಅರಿವು ಮೂಡಿಸುವಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.<br>➢ **ವಿಶೇಷ ಅಭಿಯಾನಗಳ ಆಯೋಜನೆ:**<br>• ಸ್ವಚ್ಛತಾ ಹೀ ಸೇವಾ<br>• ವಿಶ್ವ ಶೌಚಾಲಯ ದಿನಾಚರಣೆ ಅಭಿಯಾನ<br>• ಸಾಮಾಜಿಕ ಮಾಧ್ಯಮ ವಿಶೇಷ ಆಂದೋಲನ<br>• ಸ್ವಚ್ಛ ಸಂಕೀರ್ಣ ಸ್ವಚ್ಛ ಪರಿಸರ.<br>➢ **ಪರಿಹಾರ ಸಹಾಯವಾಣಿ:**<br>ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ |

| | | |
|---|---|---|
| | | ಇಲಾಖೆಯಡಿ ಬರುವ ಕುಡಿಯುವ ನೀರು ಮತ್ತು ನೈರ್ಮಲ್ಯ ಸೇರಿದಂತೆ ಇತರೆ ಸೌಲಭ್ಯಗಳ ಕುರಿತು ಸಾರ್ವಜನಿಕರಿಂದ ದೂರುಗಳು ಹಾಗೂ ಮನವಿಗಳನ್ನು ಸ್ವೀಕರಿಸಲು ಪಂಚಮಿತ್ರ ಸಹಾಯವಾಣಿ ಪ್ರಾರಂಭಿಸಲಾಗಿದ್ದು, (8277506000) ದೂರು/ ಕುಂದುಕೊರತೆಗಳನ್ನು ಸ್ವೀಕರಿಸಿ ಸೂಕ್ತ ಪರಿಹಾರ ನೀಡಲಾಗುತ್ತಿ .<br>ಜಿಲ್ಲಾವಾರು ವಿವರಗಳನ್ನು **ಅನುಬಂದ**-4ರಲ್ಲಿ ನೀಡಲಾಗಿದೆ. |
| (ಇ) | ಸರಕಾರ ಕಟ್ಟಿಕೊಟ್ಟಿರುವ ಆಶ್ರಯ ಮನೆಗಳಿಗೆ ಶೌಚಾಲಯಗಳೇ ಇಲ್ಲದೆ ಟಾಯ್ಲೆಟ್ ಅನ್ನು ಫಲಾನುಭವಿಗಳೇ ನಿರ್ಮಿಸಿಕೊಳ್ಳಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಹೌದು, ಆಶ್ರಯ ಯೋಜನೆಗಳಡಿ ವಸತಿ ಇಲಾಖೆಯಿಂದ ವಸತಿ ಸೌಕರ್ಯ ಒದಗಿಸಲು ಸಹಾಯಧನ ಮಾತ್ರ ನೀಡಲಾಗುತ್ತಿದ್ದು, ಶೌಚಾಲಯ ನಿರ್ಮಾಣಕ್ಕೆ ಪ್ರತ್ಯೇಕವಾಗಿ ಸಹಾಯಧನ ನೀಡುತ್ತಿಲ್ಲ.<br>ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆ ಮೂಲಕ ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಯಡಿ ಶೌಚಾಲಯ ನಿರ್ಮಾಣಕ್ಕೆ ಸಹಾಯಧನ ಪಡೆಯಲು ಅವಕಾಶವಿರುತ್ತದೆ. |

**(ಪ್ರಿಯಾಂಕ್ ಖರ್ಗೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು